ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹನ್ನೊಂದನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಶುಕ್ರವಾರ, ದಿನಾಂಕ 17ನೇ ಡಿಸೆಂಬರ್, 2021
(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೇ ಪಟ್ಟಿ

ಆ) **ವರ್ಗಾವಣೆಗೊಂಡ ಪ್ರಶ್ನೆ:-**

1. ದಿನಾಂಕ: 14.12.2021ರ 2ನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ರಾಮಪ್ಪ ಎಸ್. ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 19(398) : ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು
2. ದಿನಾಂಕ: 14.12.2021ರ 2ನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ಅಭಯ್ ಪಾಟೀಲ್ ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 20(522) : ಮಾನ್ಯ ನಗರಾಭಿವೃದ್ಧಿ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೇ ಪಟ್ಟಿ

2. ವಿತ್ತೀಯ ಕಾರ್ಯಕಲಾಪಗಳು

ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:-

ಅ) 2021-22ನೇ ಸಾಲಿನ ಪೂರಕ ಅಂದಾಜುಗಳ ಎರಡನೇ ಕಂತಿನ ಬೇಡಿಕೆಗಳನ್ನು ಮಂಡಿಸುವುದು.

ಆ) 2021-22ನೇ ಸಾಲಿನ ರಾಜ್ಯ ಹಣಕಾಸಿನ ಮಧ್ಯವಾರ್ಷಿಕ ಪರಿಶೀಲನಾ ವರದಿಯನ್ನು ಮಂಡಿಸುವುದು.

... 2/ ..

3. ಶಾಸನ ರಚನೆ

I.ವಿಧೇಯಕಗಳನ್ನು ಮಂಡಿಸುವುದು

1. ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:-

ಅ) 2021ನೇ ಸಾಲಿನ ಕರ್ನಾಟಕ ನಗರಪಾಲಿಕೆಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2. ಶ್ರೀ ಬಿ.ಸಿ. ಪಾಟೀಲ್ (ಮಾನ್ಯ ಕೃಷಿ ಸಚಿವರು) ಅವರು:-

ಅ) 2021ನೇ ಸಾಲಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

II. ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. ಶ್ರೀ ಆರ್. ಅಶೋಕ್ (ಮಾನ್ಯ ಕಂದಾಯ ಸಚಿವರು) ಅವರು:-

ಅ) 2021ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಶ್ರೀ ಆರ್. ಅಶೋಕ್ (ಮಾನ್ಯ ಕಂದಾಯ ಸಚಿವರು) ಅವರು:-

ಅ) 2021ನೇ ಸಾಲಿನ ಕರ್ನಾಟಕ ಕೆಲವು ಇನಾಮುಗಳ ರದ್ದಿಯಾತಿ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. ಶ್ರೀ ಬಿ.ಎ. ಬಸವರಾಜ (ಮಾನ್ಯ ನಗರಾಭಿವೃದ್ಧಿ ಸಚಿವರು) ಅವರು:-

ಅ) 2021ನೇ ಸಾಲಿನ ಕರ್ನಾಟಕ ನಗರಪಾಲಿಕೆಗಳ ಮತ್ತು ಕೆಲವು ಇತರ ಕಾನೂನು (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

... 3/ ..

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಸಿದ್ದರಾಮಯ್ಯ, ವಿ. ಮುನಿಯಪ್ಪ, ಪಿ.ಟಿ. ಪರಮೇಶ್ವರ್ ನಾಯಕ್, ಟಿ. ರಘುಮೂರ್ತಿ, ಗಣೇಶ್ ಪ್ರಕಾಶ್ ಹುಕ್ಕೇರಿ ಹಾಗೂ ಇತರರು** – ರಾಜ್ಯದಲ್ಲಿ ಇತ್ತೀಚೆಗೆ ಸಂಭವಿಸಿದ ಪ್ರವಾಹ ಮತ್ತು ಅತಿವೃಷ್ಟಿಯಿಂದ ರೈತರ ಬೆಳೆ, ರಸ್ತೆ, ಸೇತುವೆ, ಸರ್ಕಾರಿ ಕಟ್ಟಡಗಳು, ಸಾರ್ವಜನಿಕ ಮನೆಗಳು ಹಾನಿಯಾಗಿದ್ದು, ಜನ ಜಾನುವಾರುಗಳ ಪ್ರಾಣ ಹಾನಿಯಾಗಿರುವುದರಿಂದ ರೈತರು ಹಾಗೂ ರಾಜ್ಯದ ಜನತೆ ಸಂಕಷ್ಟದಲ್ಲಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

2) **ಶ್ರೀಯುತರುಗಳಾದ ಕೆ.ಎಂ. ಶಿವಲಿಂಗೇಗೌಡ, ಬೆಳ್ಳಿ ಪ್ರಕಾಶ್, ಆರ್. ಮಂಜುನಾಥ್, ಶ್ರೀಮತಿ ಕೆ. ಪೂರ್ಣಿಮ ಹಾಗೂ ಇತರರು** – ಕರ್ನಾಟಕ ರಾಜ್ಯದಲ್ಲಿ ಗೊಲ್ಲ ಸಮುದಾಯದ ಕಾಡುಗೊಲ್ಲ ಉಪ ಪಂಗಡಗಳನ್ನು ಎಸ್.ಟಿ. ಸಮುದಾಯಕ್ಕೆ ಸೇರಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ಎ.ಟಿ. ರಾಮಸ್ವಾಮಿ, ಕೆ.ಎಂ. ಶಿವಲಿಂಗೇಗೌಡ, ಕೆ. ಶ್ರೀನಿವಾಸಗೌಡ, ಕೆ.ಎಸ್. ಲಿಂಗೇಶ್, ಡಾ. ಕೆ. ಅನ್ನದಾನಿ ಹಾಗೂ ಇತರರು** – ಕರ್ನಾಟಕ ರಾಜ್ಯದಲ್ಲಿ ಲಕ್ಷಾಂತರ ಕೋಟಿ ರೂಪಾಯಿಗಳ ಸರ್ಕಾರದ ಸಂಪತ್ತನ್ನು ಲೂಟಿ ಮಾಡುತ್ತಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

5. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ರವೀಂದ್ರ ಶ್ರೀಕಂಠಯ್ಯ ಇವರು – ಶ್ರೀರಂಗಪಟ್ಟಣ ಕ್ಷೇತ್ರ ವ್ಯಾಪ್ತಿಯಲ್ಲಿ ಜಮೀನುಗಳ ಸರ್ವೇ, ಪೋಡಿ, ನಕಾಶೆಗಳು ದೊರಕದೇ ಸಂಕಷ್ಟಕ್ಕೆ ಒಳಗಾಗಿರುವ ರೈತರುಗಳಿಗೆ ಅನುಕೂಲ ಮಾಡಿಕೊಡುವ ಬಗ್ಗೆ ದಿನಾಂಕ:13.12.2021ರ ಗಮನ ಸೆಳೆಯುವ ಸೂಚನೆಗೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm